# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿನ ಪ್ರಧಾನ ಇಂಜಿನಿಯರ್ ಹುದ್ದೆಯನ್ನು ಮುಖ್ಯ ಇಂಜಿನಿಯರ್ ವೃಂದಕ್ಕೆ ತಾತ್ಕಾಲಿಕವಾಗಿ ನಿಮ್ನೀಕರಿಸುವ (Down grade) ಬಗ್ಗೆ - ಆದೇಶ.

* * * *

ಸರ್ಕಾರಿ ಆದೇಶ ಸಂಖ್ಯೆ: ಜಸಂಇ 250 ಸೇವಸು 2007, ಬೆಂಗಳೂರು, ದಿನಾಂಕ: 31-10-2007.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ನೀಇ 240 ಸೇವಸು 93, ದಿನಾಂಕ: 25-09-1993
2) ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಸಅ/ಇಎಸ್ಎ/69/2007-08, ದಿನಾಂಕ: 17-10-2007.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ 25-09-1993ರಲ್ಲಿ ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿನ ಮುಖ್ಯ ಇಂಜಿನಿಯರ್ ಹುದ್ದೆಯನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಧಾನ ಇಂಜಿನಿಯರ್ ವೃಂದಕ್ಕೆ ಉನ್ನತೀಕರಿಸಲಾಗಿದೆ.

ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿನ ಪ್ರಧಾನ ಇಂಜಿನಿಯರ್ ಹುದ್ದೆ ಬಹಳ ಕಾಲದಿಂದ ಖಾಲಿ ಇರುತ್ತದೆ. ಜಲಸಂಪನ್ಮೂಲ ಇಲಾಖೆಯಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಇಬ್ಬರು ಪ್ರಧಾನ ಇಂಜಿನಿಯರುಗಳು ದಿನಾಂಕ 31-10-2007 ರಂದು ಸೇವೆಯಿಂದ ನಿವೃತ್ತರಾಗಲಿದ್ದಾರೆ. ಜಲಸಂಪನ್ಮೂಲ ಇಲಾಖೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಮುಖ್ಯ ಇಂಜಿನಿಯರುಗಳು ಕೆ.ಸಿ.ಎಸ್.ಆರ್. ನಿಯಮ 32 ರಡಿ ಮುಖ್ಯ ಇಂಜಿನಿಯರ್ ಹುದ್ದೆಯ ಸ್ವತಂತ್ರ ಪ್ರಭಾರದಲ್ಲಿರುವುದರಿಂದ ಪ್ರಧಾನ ಇಂಜಿನಿಯರ್ ಹುದ್ದೆಯನ್ನು ನಿರ್ವಹಿಸಲು ನಿಯಮಾನುಸಾರ ಅರ್ಹರಿರುವುದಿಲ್ಲ. ಇದು ಇಂಜಿನಿಯರ್ ಇನ್ ಚೀಫ್ ಹುದ್ದೆ ಯಾದ್ದರಿಂದ ಇದನ್ನು ಪ್ರಧಾನ ಇಂಜಿನಿಯರ್ ವೃಂದದವರಿಂದ ಮಾತ್ರ ತುಂಬಬೇಕಾಗಿರುತ್ತದೆ.

ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆಯ ದೈನಂದಿನ ಕೆಲಸ ಕಾರ್ಯಗಳು ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ, ಈಗಿರುವ ಮುಖ್ಯ ಇಂಜಿನಿಯರುಗಳು ಕೆ.ಸಿ.ಎಸ್.ಆರ್. ನಿಯಮ 32ರಡಿ ಕಾರ್ಯನಿರ್ವಹಿಸುತ್ತಿರುವುದರಿಂದ ಇವರುಗಳನ್ನು ಪ್ರಧಾನ ಇಂಜಿನಿಯರ್ ಹುದ್ದೆಯ ಅಧಿಕ ಪ್ರಭಾರದಲ್ಲಿಡಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ ವಾದ್ದರಿಂದ ಪ್ರಸ್ತುತ ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆಯ ಪ್ರಧಾನ ಇಂಜಿನಿಯರ್ ಹುದ್ದೆಯನ್ನು ತಾತ್ಕಾಲಿಕವಾಗಿ ಮುಖ್ಯ ಇಂಜಿನಿಯರ್ ವೃಂದಕ್ಕೆ ನಿಮ್ನೀಕರಿಸಿ ಕೆ.ಸಿ.ಎಸ್.ಆರ್. ನಿಯಮ 32 ರಡಿ ಮುಖ್ಯ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಜೇಷ್ಠತೆಯಲ್ಲಿ ಹಿರಿಯ ರಾದವರೊಬ್ಬರನ್ನು ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆಯ ನಿಮ್ನೀಕರಿಸಿದ ಮುಖ್ಯ ಇಂಜಿನಿಯರ್ ಹುದ್ದೆಯ ಅಧಿಕ ಪ್ರಭಾರದಲ್ಲಿಡಲು ನಿರ್ಧರಿಸಲಾಗಿದೆ. ಅದರಂತೆ ಈ ಆದೇಶ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿನ ಪ್ರಧಾನ ಇಂಜಿನಿಯರ್ ಹುದ್ದೆಯನ್ನು ತಾತ್ಕಾಲಿಕವಾಗಿ ಮುಖ್ಯ ಇಂಜಿನಿಯರ್ ವೃಂದಕ್ಕೆ ನಿಮ್ನೀಕರಿಸಿದೆ. ನಿಮ್ನೀಕರಿಸಿದ ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಈ ಹುದ್ದೆಗೆ ಶ್ರೀ.ಎಂ.ಬಂಗಾರಸ್ವಾಮಿ, ಮುಖ್ಯ ಇಂಜಿನಿಯರ್ (ಅಂತರರಾಜ್ಯ ಜಲ ವಿವಾದ), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ.

-703-



ಬೆಂಗಳೂರು ಇವರನ್ನು ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧಿಕ ಪ್ರಭಾರದಲ್ಲಿಡಲಾಗಿದೆ.

ಭಾರತ ರಾಷ್ಟ್ರಪತಿಯವರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಸಿದ್ದಗಂಗಯ್ಯ) 31/10/02
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ(ಸೇವೆಗಳು-ಎ)

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು-560001.
2. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
3. ಪ್ರಧಾನ ಇಂಜಿನೀಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು-560009.
4. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಆಲಮಟ್ಟಿ/ ಬೆಂಗಳೂರು-560001.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಧಾರವಾಡ/ ಬೆಂಗಳೂರು-560001.
6. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಮೈಸೂರು/ ಬೆಂಗಳೂರು-560001.
7. ಎಲ್ಲಾ ಆಡಳಿತಾಧಿಕಾರಿಗಳು, ಜಲಸಂಪನ್ಮೂಲ ಇಲಾಖೆ.
8. ಎಲ್ಲಾ ಮುಖ್ಯ ಇಂಜಿನಿಯರುಗಳು, ಜಲಸಂಪನ್ಮೂಲ ಇಲಾಖೆ.
9. ನಿರ್ದೇಶಕರು, ಕೆ.ಇ.ಆರ್.ಎಸ್., ಕೆ.ಆರ್.ಸಾಗರ, ಮಂಡ್ಯ ಜಿಲ್ಲೆ.
10. ನಿರ್ದೇಶಕರು, ವಾಲ್ಮಿ, ಧಾರವಾಡ.
11. ಮಹಾ ವ್ಯವಸ್ಥಾಪಕರು, ಆರ್ ಅಂಡ್ ಆರ್, ಬಾಗಲಕೋಟೆ.
12. ಮುಖ್ಯ ಇಂಜಿನೀಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಬೆಂಗಳೂರು-560001.
13. ಮುಖ್ಯ ಇಂಜಿನೀಯರ್, ಸಂಪರ್ಕ ಮತ್ತು ಕಟ್ಟಡ (ಉತ್ತರ), ಧಾರವಾಡ.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರಿಗೆ
15. ಸರ್ಕಾರದ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ ಮತ್ತು ಲೋಕೋಪಯೋಗಿ ಇಲಾಖೆ ಇವರ ಆಪ್ತ ಸಹಾಯಕರಿಗೆ.
16. ಸರ್ಕಾರದ ಜಂಟಿ ಕಾರ್ಯದರ್ಶಿಗಳು ಜಲಸಂಪನ್ಮೂಲ ಇಲಾಖೆ (ಸೇವೆಗಳು) ಇವರ ಆಪ್ತ ಸಹಾಯಕರಿಗೆ.
17. ಎಲ್ಲಾ ಉಪ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ.
18. ಎಲ್ಲಾ ವಿಶೇಷ ಕರ್ತವ್ಯಾಧಿಕಾರಿಗಳು ಜಲಸಂಪನ್ಮೂಲ ಇಲಾಖೆ.
19. ಎಲ್ಲಾ ಅಧೀನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ.
20. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ,ಬಿ,ಸಿ)
21. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು. ಇಲಾಖೆ (ಸೇವೆಗಳು-3).
22. ಶ್ರೀ.ಎಂ.ಬಂಗಾರಸ್ವಾಮಿ, ಮುಖ್ಯ ಇಂಜಿನೀಯರ್ (ಅಂತರರಾಜ್ಯ ಜಲ ವಿವಾದ), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು-560009.
23. ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿಗಳು.